# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1777 (2011)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಸಮಾಜ ಕಲ್ಯಾಣ ಸಚಿವರು

ವಿಷಯ : ಗಂಗಾ ಕಲ್ಯಾಣ ಯೋಜನೆಯಲ್ಲಿನ ಲೋಪಗಳ ಬಗ್ಗೆ

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಪೂರ್ಣ ಕಾಮಗಾರಿ ನಡೆದು ಫಲಾನುಭವಿಗಳ ಕೈ ಸೇರಿರುವ ಘಟಕಗಳೆಷ್ಟು ; ಹಾಗೂ ಇನ್ನೂ ಅಪೂರ್ಣವಾಗಿರುವ ಘಟಕಗಳೆಷ್ಟು ; ಇವುಗಳ ಇಂದಿನ ಸ್ಥಿತಿಗಳೊಂದಿಗೆ ಮತ್ತು ಇವುಗಳನ್ನು ಕೊರೆದಿರುವ ಊರಿನ ಹೆಸರು, ಫಲಾನುಭವಿಗಳ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಈ ಯೋಜನೆಯಡಿಯಲ್ಲಿ ಕೊಳವೆ ಬಾವಿಯನ್ನು ಕೊರೆಯಲು ಇರುವ ಮನದಂಡಗಳೇನು ; ಟೆಂಡರ್ ಪ್ರಕ್ರಿಯೆ ಕಾಮಗಾರಿಯನ್ನು ಪಡೆದ ಟೆಂಡರ್‌ದಾರರು ಸರಿಯಾದ ಸಮಯಕ್ಕೆ ಕಾಮಗಾರಿ ನಡೆಸದಿದ್ದರೆ, ಅವರ ಮೇಲೆ ಕೈಗೊಳ್ಳುವ ಕ್ರಮಗಳೇನು; ಇಲ್ಲಿಯವರೆವಿಗೆ ಯಾವ ಟೆಂಡರ್‌ದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿ ದೆಯೇ ? (ವಿವರ ನೀಡುವುದು)